144ನೇ ಅಧಿವೇಶನವು ದಿ: 16/9/21 ರಂದು ಸದನದಲ್ಲಿ
ಚರ್ಚೆಯಾಗಿದೆ. ನಿ-72, ಕ್ರ-82

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅಡಗೂರು ಹೆಚ್ ವಿಶ್ವನಾಥ್, ಇವರು ನಿಯಮ 72ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ.**

ವಿಷಯ:-

ಅಲೆಯನ್ಸ್ ವಿಶ್ವವಿದ್ಯಾಲಯದಿಂದ ಮಾನದಂಡಗಳನ್ನು ಉಲ್ಲಂಘಿಸಿ ಕ್ರಿಮಿನಲ್ ಹಿನ್ನೆಲೆ ಇರುವವರಿಗೆ ಗೌರವ ಡಾಕ್ಟರೇಟ್ ನೀಡಿರುವ ಬಗ್ಗೆ ಸರ್ಕಾರಕ್ಕೆ ದೂರು ಬಂದ ಹಿನ್ನೆಲೆಯಲ್ಲಿ ಈ ದೂರಿನ ಕುರಿತು ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಅಭಿಪ್ರಾಯ ಕೋರಲಾಗಿ, ಸದರಿ ಪರಿಷತ್ ಇದು ಗಂಭೀರ ಪ್ರಕರಣವಾಗಿದ್ದು, ಎಲ್ಲಾ ಆಯಾಮಗಳಿಂದ ಪರಿಶೀಲಿಸುವ ಅಗತ್ಯತೆ ಇರುವುದರಿಂದ ಸರ್ಕಾರದ ಹಂತದಲ್ಲಿ ಸೂಕ್ತ ತನಿಖೆ ನಡೆಸಬಹುದಾಗಿದೆ ಎಂದು ಅಭಿಪ್ರಾಯ ನೀಡಿದಾಗ್ಯೂ ಸರ್ಕಾರ ಈ ಬಗ್ಗೆ ಸೂಕ್ತ ತನಿಖೆ ಅಗತ್ಯವಿಲ್ಲವೆಂದು ಉತ್ತರಿಸುವ ಕುರಿತು ಈ ಪ್ರಕರಣವನ್ನು ತನಿಖೆಗೆ ಆದೇಶಿಸಲು ಮಾನ್ಯ ಉನ್ನತ ಶಿಕ್ಷಣ ಹಾಗೂ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ:**

ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಾಗಲಿ ಅಥವಾ ಖಾಸಗಿ ವಿಶ್ವವಿದ್ಯಾಲಯಗಳಾಗಲಿ ಗೌರವ ಡಾಕ್ಟರೇಟ್ ಪದವಿ ಪ್ರಧಾನ ಮಾಡುವ ಪ್ರಕ್ರಿಯೆಯಲ್ಲಿ ಸರ್ಕಾರದ ಪಾತ್ರವಿರುವುದಿಲ್ಲ. ಈ ಕುರಿತು ವಿಶ್ವವಿದ್ಯಾಲಯಗಳಿಂದ ರಚಿಸಲ್ಪಟ್ಟ ಸಂಗತ ಪರಿನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯಗಳಿಂದ ಈ ಪ್ರಕ್ರಿಯೆಯನ್ನು ಜರುಗಿಸಲಾಗುತ್ತದೆ. ಕಳಂಕಿತ ಹಿನ್ನೆಲೆ ಹೊಂದಿರುವ ವ್ಯಕ್ತಿಗಳಿಗೆ ಗೌರವ ಡಾಕ್ಟರೇಟ್ ಪದವಿ ಪ್ರಧಾನ ಮಾಡುವ ಮುನ್ನ ಈ ವಿಷಯವನ್ನು ಖಚಿತಪಡಿಸಿಕೊಳ್ಳುವುದು ಅಲಯನ್ಸ್ ವಿಶ್ವವಿದ್ಯಾಲಯದ ಕರ್ತವ್ಯವಾಗಿದ್ದು ಸರ್ಕಾರದ ಹಂತದಲ್ಲಿ ಯಾವುದೇ ಕ್ರಮವಿರುವುದಿಲ್ಲ.

ಅಲಿಯನ್ಸ್ ವಿಶ್ವವಿದ್ಯಾಲಯವು ರಾಜ್ಯ ಶಾಸನ ರಚನೆಯ ಮೂಲಕ ಖಾಸಗಿ ವಿಶ್ವವಿದ್ಯಾಲಯವಾಗಿ ಸ್ಥಾಪಿತಗೊಂಡಿರುತ್ತದೆ ಹಾಗೂ ಅಲಯನ್ಸ್ ಖಾಸಗಿ ವಿಶ್ವವಿದ್ಯಾಲಯದ ಅಧಿನಿಯಮ, 2010ರ ಪ್ರಕರಣ 32(viii) ರಲ್ಲಿ ಗೊತ್ತುಪಡಿಸಿರುವಂತೆ ಗೌರವ ಡಾಕ್ಟರೇಟ್ ಪದವಿ ನೀಡಲು ಅಲಯನ್ಸ್ ವಿಶ್ವವಿದ್ಯಾಲಯವು ಸಕ್ಷಮವಾಗಿರುತ್ತದೆ. ಪ್ರಸ್ತಾಪಿತ ದೂರಿಗೆ ಸಂಬಂಧಿಸಿದ ಗೌರವ ಡಾಕ್ಟರೇಟ್ ಪದವಿಯನ್ನು 2017ರಲ್ಲಿ ಅಧಿಕೃತವಾಗಿ ನೀಡಿರುವುದಾಗಿ ಅಲಯನ್ಸ್ ವಿಶ್ವವಿದ್ಯಾಲಯವು ತಿಳಿಸಿರುತ್ತದೆ. ಈ ಹಿನ್ನೆಲೆಯಲ್ಲಿ, ಮುಂದಿನ ಕ್ರಮದ ಅಗತ್ಯತೆ ಇರುವುದಿಲ್ಲ.

ಸಂಖ್ಯೆ: ಇ-ಕಛೇರಿ ಸಂಖ್ಯೆ: ಇಡಿ/204/ಯುಆರ್‌ಸಿ/2021

(ಡಾ॥ ಅಶ್ವಥ್‌ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆಗಳ ಸಚಿವರು